# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀಮತಿ ವರಲಕ್ಷ್ಮಮ್ಮ, ಅಧ್ಯಕ್ಷರು ಮತ್ತು ಶ್ರೀ ಕೆ.ವಿ. ವೆಂಕಟೇಶಪ್ಪ, ಸದಸ್ಯರು, ಮುಡಿಯನೂರು ಗ್ರಾಮ ಪಂಚಾಯಿತಿ, ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಮತ್ತು 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ ಇವರ ಪತ್ರ ಸಂಖ್ಯೆ: ಜಿಪಂಕೋ/ನರೇಗಾ/ಸಿ.ಆರ್.10/2017-18, ದಿನಾಂಕ: 15-12-2017.
2) ಇದೇ ಸಮಸಂಖ್ಯೆಯ ಕಾರಣ ಕೇಳುವ ನೋಟಿಸ್ ದಿನಾಂಕ: 04.01.2018.
3) ಶ್ರೀಮತಿ ವರಲಕ್ಷ್ಮಮ್ಮ, ಅಧ್ಯಕ್ಷರು ಮತ್ತು ಶ್ರೀ ಕೆ.ವಿ. ವೆಂಕಟೇಶಪ್ಪ, ಸದಸ್ಯರು ಮುಡಿಯನೂರು ಗ್ರಾಮ ಪಂಚಾಯಿತಿ, ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆ ರವರು ಕಾರಣ ಕೇಳಿ ನೋಟೀಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ: 09.02.2018.
4) ಸಮಸಂಖ್ಯೆಯ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ ದಿನಾಂಕ: 27-02-2018, 12-03-2018, 08-06-2018.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ ಇವರ ಪತ್ರದ ಸಂಖ್ಯೆ: ಜಿಪಂಕೋ/ನರೇಗಾ/ ಸಿ.ಆರ್.29/2016-17, ದಿನಾಂಕ: 25-06-2018.
6) ಶ್ರೀಮತಿ ವರಲಕ್ಷ್ಮಮ್ಮ, ಅಧ್ಯಕ್ಷರು ಮತ್ತು ಶ್ರೀ ಕೆ.ವಿ. ವೆಂಕಟೇಶಪ್ಪ, ಸದಸ್ಯರು, ಮುಡಿಯನೂರು ಗ್ರಾಮ ಪಂಚಾಯಿತಿ, ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆ ರವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ: 12-07-2018, 20-07-2018.
7) ಸಮಸಂಖ್ಯೆಯ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ ದಿನಾಂಕ:28-07-2018.

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ಕೋಲಾರ ಜಿಲ್ಲೆ, ಮುಳಬಾಗಿಲು ತಾಲ್ಲೂಕಿನ ಮುಡಿಯನೂರು ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀಮತಿ ವರಲಕ್ಷ್ಮಮ್ಮ ಹಾಗೂ ಸದಸ್ಯರಾದ ಶ್ರೀ ಕೆ.ವಿ. ವೆಂಕಟೇಶಪ್ಪ, ಇವರು 2015-2016 ಮತ್ತು 2016-2017 ನೇ ಸಾಲಿನ ಎಂ.ಜಿ.ಎನ್.ಆರ್.ಇ.ಜಿ.ಎ. ಯೋಜನೆಯಡಿ ಹಣ ದುರುಪಯೋಗಪಡಿಸಿಕೊಂಡಿರುವ ಬಗ್ಗೆ ಸಲ್ಲಿಸಿದ ದೂರಿನ ಕುರಿತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ ರವರು ತನಿಖೆ ಮಾಡಿ ವರದಿಯನ್ನು ಸಲ್ಲಿಸಿರುತ್ತಾರೆ.

ತನಿಖಾ ವರದಿಯನ್ನು ಪರಿಶೀಲಿಸಲಾಗಿ, 2015-2016 ಮತ್ತು 2016-2017ನೇ ಸಾಲಿನ ಎಂ.ಜಿ.ಎನ್.ಆರ್.ಇ.ಜಿ.ಎ. ಯೋಜನೆಯಡಿ ಆಪಾದಿತ ಅಧ್ಯಕ್ಷರು ಒಟ್ಟಾರೆ 29 ಕಾಮಗಾರಿಗಳಲ್ಲಿ ಅವ್ಯವಹಾರ ಎಸಗಿದ್ದು, ಸರ್ಕಾರದ ಬೊಕ್ಕಸಕ್ಕೆ ರೂ. 23,66,681/- ಗಳ ನಷ್ಟವುಂಟು ಮಾಡಿರುವುದಾಗಿ ತಿಳಿಸಿರುತ್ತಾರೆ ಹಾಗೂ ಆಪಾದಿತ ಸದಸ್ಯರು 29 ಕಾಮಗಾರಿಗಳಲ್ಲಿ ಗುತ್ತಿಗೆ ಕಾಮಗಾರಿಯನ್ನು ಮಾಡಿಸಿ ಸ್ವಂತ ಖಾತೆಗೆ ರೂ. 17,71,312/- ಗಳನ್ನು ಜಮೆ ಮಾಡಿಕೊಳ್ಳಲು ಕಾರಣರಾಗಿರುತ್ತಾರೆ ಎಂದು ವರದಿಯಲ್ಲಿ ತಿಳಿಸಿರುತ್ತಾರೆ. ಸರ್ಕಾರದ ಮಾರ್ಗಸೂಚಿಯನ್ನು ಉಲ್ಲಂಘಿಸಿ ಹಣ ದುರುಪಯೋಗಪಡಿಸಿಕೊಂಡಿರುವ ಬಗ್ಗೆ ಮುಡಿಯನೂರು ಗ್ರಾಮ ಪಂಚಾಯಿತಿಯಲ್ಲಿ ಕೆಲಸ ನಿರ್ವಹಿಸಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯ ಮೇಲೆ ಶಿಸ್ತು ಕ್ರಮ ಜರುಗಿಸಲಾಗುತ್ತಿದ್ದು, ಸದರಿ ಅವಧಿಯಲ್ಲಿ ಮುಡಿಯನೂರು ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀಮತಿ ವರಲಕ್ಷ್ಮಮ್ಮ, ಮತ್ತು ಶ್ರೀ ಕೆ.ವಿ. ವೆಂಕಟೇಶಪ್ಪ, ಸದಸ್ಯರು ರವರ ಮೇಲೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) ಮತ್ತು 43(ಎ) ರನ್ವಯ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಮತ್ತು ಪ್ರಕರಣ 43(ಎ) ರನ್ವಯ ಗ್ರಾಮ ಪಂಚಾಯತಿಯ ಅಧ್ಯಕ್ಷರ ಸ್ಥಾನದಿಂದ ಹಾಗೂ ಸದಸ್ಯರ ಸ್ಥಾನದಿಂದ ಏಕೆ ತೆಗೆದು ಹಾಕಬಾರದು ಎಂಬ ಬಗ್ಗೆ 15 ದಿನಗಳೊಳಗಾಗಿ ವಿವರಣೆ ನೀಡುವಂತೆ ಶ್ರೀಮತಿ ವರಲಕ್ಷ್ಮಮ್ಮ, ಅಧ್ಯಕ್ಷರು ಮತ್ತು ಶ್ರೀ ಕೆ.ವಿ. ವೆಂಕಟೇಶಪ್ಪ, ಸದಸ್ಯರು, ಮುದಿಮನೂರು ಗ್ರಾಮ ಪಂಚಾಯಿತಿ ರವರಿಗೆ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು.

ಮೇಲೆ ಓದಲಾದ (3) ರಲ್ಲಿ ಸದರಿಯವರು ಸರ್ಕಾರದಿಂದ ಜಾರಿಗೊಳಿಸಲಾಗಿದ್ದ ಕಾರಣ ಕೇಳುವ ನೋಟೀಸಿಗೆ ಕೆಳಗಿನಂತೆ ಉತ್ತರವನ್ನು ಸಲ್ಲಿಸಿರುತ್ತಾರೆ.

- ವಿವಾದಿತ ಕಾಮಗಾರಿಗಳ ಬಗ್ಗೆ ನನ್ನ ಡ್ಯಾಂಗಲ್‌ನಿಂದ ಹಣ ಬಿಡುಗಡೆ ಮಾಡಿರುವುದಿಲ್ಲ. ನನ್ನ ಡ್ಯಾಂಗಲ್ ಅವಧಿ ಮುಗಿದ ನಂತರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರು ಅಂದಿನ ಕಾರ್ಯನಿರ್ವಾಹಕ ಅಧಿಕಾರಿಗಳ ಲಾಗಿನ್ ಮೂಲಕ ಆಕ್ಷೇಪಿತ ಕಾಮಗಾರಿಗಳಿಗೆ ಹಣ ಬಿಡುಗಡೆ ಮಾಡಿರುವುದು ದೃಢಪಟ್ಟಿರುತ್ತದೆ ಎಂದು ಆಪಾದಿತ ಅಧ್ಯಕ್ಷರು ತಿಳಿಸಿರುತ್ತಾರೆ.
- ನರೇಗಾ ಮಾರ್ಗಸೂಚಿಯಂತೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು/ ತಾಲ್ಲೂಕು ಕಾರ್ಯಕ್ರಮ ಅಧಿಕಾರಿಗಳು ಶೇ 100 ರಷ್ಟು ಕಾಮಗಾರಿಗಳನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಜಿಲ್ಲಾ ಸಮನ್ವಯ ಅಧಿಕಾರಿಗಳು ಶೇ 10ರಷ್ಟು ಕಾಮಗಾರಿಗಳನ್ನು ಹಾಗೂ ರಾಜ್ಯ ಮಟ್ಟದಲ್ಲಿ ಶೇ 2ರಷ್ಟು ಕಾಮಗಾರಿಗಳನ್ನು ಭೌತಿಕವಾಗಿ ಹಾಗೂ ಎಂ.ಐ.ಎಸ್. ದಾಖಲೆಗಳನ್ನು ಪರಿಶೀಲಿಸಿ ಸೂಕ್ತ ನಿರ್ದೇಶನ ನೀಡುವಂತೆ ಸೂಚಿಸಿ ಆದೇಶಿಸಿರುತ್ತಾರೆ. ಆದರೆ ಮೇಲಾಧಿಕಾರಿಗಳು ಸದರಿ ಪ್ರಕರಣದಲ್ಲಿ ಯಾವುದೇ ಆಕ್ಷೇಪಣೆ/ನಿರ್ದೇಶನಗಳನ್ನು ನೀಡಿರುವುದಿಲ್ಲ.
- 2015-16 ಮತ್ತು 2016-17ನೇ ಸಾಲಿನ ನರೇಗಾ ಕಾಮಗಾರಿಗಳ ಕ್ರಿಯಾಯೋಜನೆಯು ನಿಯಮಾನುಸಾರ ಮೇಲಾಧಿಕಾರಿಗಳಿಂದ ಅನುಮೋದಿಸಲ್ಪಟ್ಟಿರುತ್ತದೆ. ಕಾಮಗಾರಿಗಳ ಅನುಷ್ಠಾನದಲ್ಲಿ ಕಂಡು ಬಂದ ನ್ಯೂನತೆಗಳ ಬಗ್ಗೆ ದೂರುದಾರರು ಗ್ರಾಮ ಪಂಚಾಯಿತಿಯಲ್ಲಿ ನಡೆದ ಸಾಮಾನ್ಯ ಸಭೆ/ವಾರ್ಡ್ ಸಭೆ ಗ್ರಾಮ ಸಭೆಗಳಲ್ಲಿ ಹಾಗೂ ಸಾಮಾಜಿಕ ಲೆಕ್ಕ ತಪಾಸಣಾ ಸಭೆಯಲ್ಲಿ ಆಕ್ಷೇಪಣೆ ಸಲ್ಲಿಸಿರುವುದಿಲ್ಲ. ಜಾಗೃತಿ ಸಮಿತಿಗಳಿಗೆ ಅಥವಾ ಜಿಲ್ಲಾ ಮಟ್ಟದ ಓಂಬುಡ್ಸ್‌ಮನ್ ನ್ಯಾಯಾಲಯಕ್ಕೆ ಮೇಲ್ಮನವಿಯನ್ನು ಸಲ್ಲಿಸಿರುವುದಿಲ್ಲ.
- ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ದಿನಾಂಕ: 15-07-2016 ಸುಚಿಂದರ ಎ. ಗುಮಾಸ್ತೆ ಮತ್ತು ಇತರರು ವಿರುದ್ಧ ಕರ್ನಾಟಕ ರಾಜ್ಯ ಪ್ರಕರಣದಲ್ಲಿ W.P.NO 25078-80/2016(GM KLA) Reported 2016(6) Kar LJ.DB Nov 2016 ರಲ್ಲಿ ಆದೇಶ ಹೊರಡಿಸಿರುವಂತೆ ದೂರುದಾರರು ಪ್ರಕರಣದಲ್ಲಿ ಮೇಲ್ಮನವಿ ದಾಖಲಿಸದೇ ಇರುವುದರಿಂದ ದೂರು ಅರ್ಜಿಯಂತೆ ತನಿಖೆಗೆ ಆದೇಶಿಸಿರುವುದು ನ್ಯಾಯಸಮತವಾಗಿರುವುದಿಲ್ಲ. ಆದ್ದರಿಂದ ತಾವು ಉದ್ದೇಶಿಸಿರುವ ಕ್ರಮವನ್ನು ಕೈಬಿಡಬೇಕಾಗಿ ಮತ್ತು ತನಿಖಾ ವರದಿಯನ್ನು ರದ್ದುಪಡಿಸಬೇಕಾಗಿ ಕೋರಿರುತ್ತಾರೆ.

ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಓದಲಾದ (4) ರಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ನ್ಯಾಯಾಲಯದಲ್ಲಿ ನಡೆದ ಮೌಖಿಕ ವಿಚಾರಣೆಯಲ್ಲಿ ಆದೇಶಿಸಲಾದಂತೆ 2015-16 ಮತ್ತು 2016-17ನೇ ಸಾಲಿನಲ್ಲಿ ಎಂ.ಜಿ.ಎನ್.ಆರ್.ಇ.ಜಿ.ಎ. ಯೋಜನೆಯಲ್ಲಿ ನಡೆದಿರುವ ಅವ್ಯವಹಾರ ಹಾಗೂ ಹಣ ದುರುಪಯೋಗಪಡಿಸಿಕೊಂಡಿರುವ ಕುರಿತು ತಕ್ಷಣ ಪರಿಶೀಲಿಸಿ ಸರ್ಕಾರಕ್ಕೆ ವರದಿ ನೀಡುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಕೋಲಾರ ಜಿಲ್ಲೆ ರವರಿಗೆ ತಿಳಿಸಲಾಗಿದ್ದ ಮೇರೆಗೆ ಮೇಲೆ ಓದಲಾದ (5) ರಲ್ಲಿ 29 ಕಾಮಗಾರಿಗಳವಾರು ಹಣದುರುಪಯೋಗದ ವಿವರಗಳನ್ನೊಳಗೊಂಡ ತಾಂತ್ರಿಕ ತನಿಖಾ

ವರದಿಯೊಂದಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಕೋಲಾರ ಜಿಲ್ಲೆ ರವರು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತಾರೆ.

ವರದಿಯನ್ನು ಪರಿಶೀಲಿಸಲಾಗಿ, ಎಂ.ಜಿ.ಎನ್.ಆರ್.ಇ.ಜಿ.ಎ. ಯೋಜನೆಯ ಮಾರ್ಗಸೂಚಿಗಳನ್ನು ಉಲ್ಲಂಘಿಸಿ ಕಾಮಗಾರಿಗಳಿಗೆ ಸಂಬಂಧಿಸಿದ ನಕಲಿ ದಾಖಲೆಗಳನ್ನು ಸೃಷ್ಟಿಸಿ ಸ್ವಂತ ಖಾತೆಗೆ ಹಣ ಜಮೆ ಮಾಡಿಕೊಂಡು ಸರ್ಕಾರದ ಹಣ ದುರ್ಬಳಕೆ ಮಾಡಿಕೊಂಡಿರುವುದು ತನಿಖಾ ಸಮಯದಲ್ಲಿ ಕಂಡು ಬಂದಿರುತ್ತದೆ ಎಂದು ಸದರಿ ವರದಿಯಲ್ಲಿ ತಿಳಿಸಿರುತ್ತಾರೆ. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)ರವರ ಆದೇಶದಂತೆ ವರದಿಯ ಪ್ರತಿಯನ್ನು ಆಪಾದಿತ ಅಧ್ಯಕ್ಷರಿಗೆ ನೀಡಲಾಗಿದ್ದು, ಸದರಿಯವರು ಓದಲಾದ (6) ರಲ್ಲಿ ಹೇಳಿಕೆಯನ್ನು ನೀಡಿರುತ್ತಾರೆ.

ಮೇಲೆ ಓದಲಾದ (7) ರನ್ವಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ನ್ಯಾಯಾಲಯದಲ್ಲಿ ಮೌಖಿಕ ವಿಚಾರಣೆ ಜರುಗಿಸಲಾಗಿ ಸದರಿ ಅಧ್ಯಕ್ಷರು, ಸದಸ್ಯರು, ಹಾಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತಾಲ್ಲೂಕು ಪಂಚಾಯತಿಯ ಸಹಾಯಕ ನಿರ್ದೇಶಕರು, ಕಾರ್ಯನಿರ್ವಾಹಕಾಧಿಕಾರಿ ಮತ್ತು ಜಿಲ್ಲಾ ಪಂಚಾಯತಿಯ ಸಹಾಯಕ ಯೋಜನಾಧಿಕಾರಿ ರವರು ಹಾಜರಾಗಿರುತ್ತಾರೆ.

ಸರ್ಕಾರವು ಲಭ್ಯವಿರುವ ಎಲ್ಲಾ ಸಾಕ್ಷ್ಯಾಧಾರಗಳು, ದಾಖಲಾತಿಗಳು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನೊಳಗೊಂಡ ತನಿಖಾ ತಂಡದ ವರದಿ, ಆಪಾದಿತರ ಲಿಖಿತ ಮತ್ತು ಮೌಖಿಕ ಹೇಳಿಕೆಗಳನ್ನು ಪರಿಶೀಲಿಸಿ, ಶ್ರೀಮತಿ ವರಲಕ್ಷ್ಮಮ್ಮ, ಅಧ್ಯಕ್ಷರು ಮತ್ತು ಶ್ರೀ ಕೆ.ವಿ. ವೆಂಕಟೇಶಪ್ಪ, ಸದಸ್ಯರು, ಮುಡಿಯನೂರು ಗ್ರಾಮ ಪಂಚಾಯಿತಿ ರವರು 2015-16 ಮತ್ತು 2016-2017ನೇ ಸಾಲಿನ ಎಂ.ಜಿ.ಎನ್.ಆರ್.ಇ.ಜಿ.ಎ. ಯೋಜನೆಯಲ್ಲಿ ನಡೆದಿರುವ ಅಕ್ರಮಗಳಲ್ಲಿ ಭಾಗಿಯಾಗಿರುವುದು ಕಂಡು ಬಂದಿರುವ ಹಿನ್ನೆಲೆಯಲ್ಲಿ ಶ್ರೀಮತಿ ವರಲಕ್ಷ್ಮಮ್ಮ, ಅಧ್ಯಕ್ಷರು, ಮುಡಿಯನೂರು ಗ್ರಾಮ ಪಂಚಾಯಿತಿ ರವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) ಮತ್ತು 43(ಎ) ರನ್ವಯ ಮುಡಿಯನೂರು ಗ್ರಾಮ ಪಂಚಾಯಿತಿಯ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿ ಸದಸ್ಯತ್ವದಿಂದ ತೆಗೆದುಹಾಕಲು ಹಾಗೂ ಶ್ರೀ ಕೆ.ವಿ. ವೆಂಕಟೇಶಪ್ಪ, ಸದಸ್ಯರು, ಮುಡಿಯನೂರು ಗ್ರಾಮ ಪಂಚಾಯಿತಿ ರವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಮುಡಿಯನೂರು ಗ್ರಾಮ ಪಂಚಾಯಿತಿಯ ಸದಸ್ಯತ್ವದಿಂದ ತೆಗೆದುಹಾಕಲು ಸರ್ಕಾರವು ನಿರ್ಧರಿಸಿದೆ.
ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/822/ಗ್ರಾಪಂಅ/2017,**
**ಬೆಂಗಳೂರು, ದಿನಾಂಕ: 06-09-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ವರಲಕ್ಷ್ಮಮ್ಮ, ಅಧ್ಯಕ್ಷರು, ಮುಡಿಯನೂರು ಗ್ರಾಮ ಪಂಚಾಯಿತಿ ರವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) ಮತ್ತು 43(ಎ) ರನ್ವಯ ಮುಡಿಯನೂರು ಗ್ರಾಮ ಪಂಚಾಯಿತಿಯ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿ ಸದಸ್ಯತ್ವದಿಂದ ತೆಗೆದುಹಾಕಿ ಆದೇಶಿಸಿದೆ ಹಾಗೂ ಶ್ರೀ ಕೆ.ವಿ. ವೆಂಕಟೇಶಪ್ಪ, ಸದಸ್ಯರು, ಮುಡಿಯನೂರು ಗ್ರಾಮ ಪಂಚಾಯಿತಿ ರವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಮುಡಿಯನೂರು ಗ್ರಾಮ ಪಂಚಾಯಿತಿಯ ಸದಸ್ಯತ್ವದಿಂದ ತೆಗೆದುಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್) 6/9
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಕೋಲಾರ ಜಿಲ್ಲೆ.

2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಮುಳಬಾಗಿಲು, ಕೋಲಾರ ಜಿಲ್ಲೆ.
3) ಶ್ರೀಮತಿ ವರಲಕ್ಷ್ಮಮ್ಮ, ಅಧ್ಯಕ್ಷರು, ಮುಡಿಯನೂರು ಗ್ರಾಮ ಪಂಚಾಯಿತಿ, ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆ.
4) ಶ್ರೀ ಕೆ.ವಿ. ವೆಂಕಟೇಶಪ್ಪ, ಸದಸ್ಯರು, ಮುಡಿಯನೂರು ಗ್ರಾಮ ಪಂಚಾಯಿತಿ, ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆ.
5) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮುಡಿಯನೂರು ಗ್ರಾಮ ಪಂಚಾಯಿತಿ, ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆ.
6) ಗಣಕ ಕೋಶ–ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
3) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.